**All India Radio: Bangalore**
**Regional Bulletin In Kannada**
**24.11.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

೧. ಶಿಡ್ಲಘಟ್ಟದಲ್ಲಿ ಎರಡು ಸಾವಿರ ಕೋಟಿ ರೂಪಾಯಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಬೆಳಗಾವಿ ಅಧಿವೇಶನದಲ್ಲಿ ಉತ್ತರಕರ್ನಾಟಕ ಭಾಗದ ಚರ್ಚೆಗೆ ಅವಕಾಶ; ಸಭಾಧ್ಯಕ್ಷ ಯು.ಟಿ.ಖಾದರ್

೩. ವಿದ್ಯುತ್ ಕಳ್ಳತನ, ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟು ಹೋಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸಚಿವ ಕೆ.ಜೆ.ಜಾರ್ಜ್ ಸೂಚನೆ

೪. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭೇಟಿ ಮಾಡಿದ ಬಿ.ವೈ.ವಿಜಯೇಂದ್ರ; ಸರ್ಕಾರದ ವಿರುದ್ಧ ಹೋರಾಟದ ಕಾರ್ಯತಂತ್ರ ಕುರಿತಂತೆ ಚರ್ಚೆ

೫. ಕನ್ನಡಿಗರ ನಿರ್ಲಕ್ಷ್ಯ ಹಿನ್ನೆಲೆ; ಕ್ಯಾಬ್ ಚಾಲಕರಿಂದ ಬೆಂಗಳೂರಿನಲ್ಲಿ ಪ್ರತಿಭಟನೆ

***************

ಖಜಾನೆ ಖಾಲಿ ಎನ್ನುವ ಬಿಜೆಪಿ ಸುಳ್ಳಿನ ಆರೋಪಕ್ಕೆ ಒಂದು ಲಕ್ಷ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟದಲ್ಲಿಂದು ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆ, ಹೆಚ್.ಎನ್.ವ್ಯಾಲಿ ೩ನೇ ಹಂತದ ೧೬೪ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಮತ್ತು ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆಯಿಂದಾಗಿ ಇಡೀ ರಾಜ್ಯದ ರೇಷ್ಮೆ ಬೆಳೆಗಾರರಿಗೆ ಅನುಕೂಲ ಆಗಲಿದೆ ಎಂದು ಹೇಳಿದ್ದಾರೆ.

ಗ್ಯಾರಂಟಿ ಕಾರ್ಯಕ್ರಮಗಳಿಗೆ ಒಂದು ಲಕ್ಷ ಕೋಟಿಗೂ ಅಧಿಕ ಮೊತ್ತದ ಹಣ ತೆಗೆದಿಡಲಾಗಿದೆ. ಜೊತೆಗೆ ಇಷ್ಟೇ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನೂ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರುವವರೆಗೂ ಯಾವ ಗ್ಯಾರಂಟಿ ಯೋಜನೆಗಳೂ ನಿಲ್ಲುವುದಿಲ್ಲ ಎಂದು ಭರವಸೆ ನೀಡಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (   ಸೆಕೆಂಡ್ಸ್)

ಶಿಡ್ಲಘಟ್ಟಕ್ಕೆ ಮಿನಿ ವಿಧಾನಸೌಧ ಸೇರಿದಂತೆ ಹೆಚ್ಚಿನ ಅಭಿವೃದ್ಧಿ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಂ.ಸಿ.ಸುಧಾಕರ್ ಮತ್ತು ಕ್ಷೇತ್ರದ ಶಾಸಕರು ಬೇಡಿಕೆ ಇಟ್ಟಿದ್ದಾರೆ. ಸಚಿವರ ಮನವಿಯಂತೆ ಎಲ್ಲಾ ಕಾಮಗಾರಿಗಳಿಗೂ ಅನುದಾನ ನೀಡಲಾಗುವುದು ಎಂದು ತಿಳಿಸಿದ್ದಾರೆ.

***************

ಬೆಳಗಾವಿ ಅಧಿವೇಶನಕ್ಕೆ ಸಿದ್ಧತೆ ನಡೆಯುತ್ತಿದ್ದು, ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಚರ್ಚೆಗೆ ಹೆಚ್ಚು ಅವಕಾಶ ನೀಡುವುದಾಗಿ ವಿಧಾನಭಾಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಅಧಿಕಾರಿಗಳ ಜೊತೆ ಸಭೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

ಸರ್ಕಾರ, ೩೧ ವಿಧೇಯಕ, ಮಂಡಿಸುತ್ತಿದ್ದು, ಉತ್ತರಕರ್ನಾಟಕದ ಸಮಸ್ಯೆಗಳ ಚರ್ಚೆಗೆ ಅವಕಾಶ ತಡೆಯುತ್ತಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಉತ್ತರ ಕರ್ನಾಟಕದ ಸಮಸ್ಯೆಗಳ ಜೊತೆಗೆ ವಿಧೇಯಕಗಳ ಬಗ್ಗೆಯೂ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಅಧಿಕಾರ ಹಂಚಿಕೆ, ಸಚಿವ ಸ್ಥಾನದ ಕುರಿತಂತೆ ಪ್ರತಿಕ್ರಿಯಿಸಿದ ಅವರು, ತಮಗೆ ಅಧಿವೇಶನ ನಡೆಸುವ ಜವಾಬ್ದಾರಿ ಇದ್ದು, ರಾಜಕಾರಣದ ಬಗ್ಗೆ ಗೊತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**************

ಅನಧಿಕೃತವಾಗಿ ಹುಕ್‌ಗಳ ಮೂಲಕ ವಿದ್ಯುತ್ ಕಳ್ಳತನ ತಡೆಯುವ ಮತ್ತು ಹೆಚ್ಚಿನ ಲೋಡ್‌ನಿಂದಾಗಿ ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳು ಸುಟ್ಟು ಹೋಗುವುದನ್ನು ತಡೆಯಲು ಅವಶ್ಯ ಕ್ರಮ ಕೈಗೊಳ್ಳುವಂತೆ ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಯಾದಗಿರಿಯಲ್ಲಿಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಹಾಗೂ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ಸಮರ್ಪಕ ವಿದ್ಯುತ್ ನಿರ್ವಹಣೆ ಮಾಡುವಂತೆ ತಿಳಿಸಿದ್ದಾರೆ.

ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆಯಿಸಿರುವ ಕಡೆಗಳಲ್ಲಿ ತಕ್ಷಣ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ವಿಶೇಷವಾಗಿ ತಾಂಡಾ, ದೊಡ್ಡಿ ಮತ್ತು ಅರ್ಹರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

*************

ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ನವದೆಹಲಿಯಲ್ಲಿಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿಯಾಗಿ ಚರ್ಚೆ ನಡೆಸಿದರು.

ಈ ಕುರಿತಂತೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ವಿಜಯೇಂದ್ರ, ರಾಜ್ಯದಲ್ಲಿ ಎನ್‌ಡಿಎ ಮೈತ್ರಿಯನ್ನು ಮತ್ತಷ್ಟು ಬಲಪಡಿಸುವ ಕುರಿತಂತೆ ಚರ್ಚಿಸಲಾಯಿತು ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ವಿರುದ್ಧ ಹೋರಾಟದ ಕಾರ್ಯತಂತ್ರಗಳ ಕುರಿತು ಚರ್ಚಿಸಲಾಯಿತು ಎಂದು ಹೇಳಿದ್ದಾರೆ.

**************

ನೂರು ವರ್ಷಗಳಿಗೂ ಹೆಚ್ಚು ಇತಿಹಾಸ ಹೊಂದಿರುವ ಕಾಂಗ್ರೆಸ್ ಪಕ್ಷದಲ್ಲಿ ಮನೆಯೊಂದು ಮೂರು ಬಾಗಿಲಾಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿರುವ ನಾಯಕತ್ವ ಬಿಕ್ಕಟ್ಟಿಗೆ ಪರಿಹಾರ ನೀಡುವ ಶಕ್ತಿ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಹೈಕಮಾಂಡ್‌ಗೆ ಇಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಈ ನಡುವೆ, ಮೈಸೂರಿನಲ್ಲಿ ಪ್ರತಿಕ್ರಿಯಿಸಿರುವ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಓರ್ವ ಬಂಡಾಯಗಾರ ಎಂದು ತಿಳಿಸಿದ್ದಾರೆ.

***************

"ಶಾಸಕರ ಖರೀದಿ ಹಾಗೂ ಕುದುರೆ ವ್ಯಾಪಾರ ಬಿಜೆಪಿ ಸಂಸ್ಕೃತಿ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದ್ದಾರೆ.

ಶಿಡ್ಲಘಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕರನ್ನು ಕಾಂಗ್ರೆಸ್ ಪಕ್ಷದ ನಾಯಕರೇ ಖರೀದಿ ಮಾಡುವ ಪರಿಸ್ಥಿತಿ ಬಂದಿದೆ ಎಂಬ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ ಇದು ಬಿಜೆಪಿ ಸಂಸ್ಕೃತಿ ಎಂದು ಹೇಳಿದ್ದಾರೆ.

ಹೈಕಮಾಂಡ್ ಹೇಳಿದ್ದನ್ನು ತಾವು ಹಾಗೂ ಎಲ್ಲರೂ ಒಪ್ಪಬೇಕು ಎಂಬ ಮುಖ್ಯಮಂತ್ರಿಯವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಅವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ ಎಂದು ತಿಳಿಸಿದ್ದಾರೆ.

***************

ಬೆಂಗಳೂರಿನ ಬೊಮ್ಮನಹಳ್ಳಿಯಲ್ಲಿ ಉಬರ್ ಮುಖ್ಯ ಕಚೇರಿಯ ಮುಂಭಾಗದಲ್ಲಿ ನೂರಾರು ಕ್ಯಾಬ್ ಚಾಲಕರು ಇಂದು ಪ್ರತಿಭಟನೆ ನಡೆಸಿದರು.

ಕನ್ನಡಿಗರನ್ನು ಅಪ್ಲಿಕೇಷನ್‌ನಲ್ಲಿ ನಿರ್ಬಂಧಿಸಲಾಗುತ್ತಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ಕಂಪನಿಯ ತಾರತಮ್ಯ, ಕೆಲಸದ ನಿರಾಕರಣೆ ವಿರುದ್ಧ ಚಾಲಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬಾಂಗ್ಲಾ ದೇಶ ಮತ್ತು ಇತರ ರಾಜ್ಯಗಳ ಚಾಲಕರಿಗೆ ಆದ್ಯತೆ ನೀಡಲಾಗುತ್ತಿದ್ದು, ಕೆಲವರು ಪರವಾನಗಿ ಹೊಂದಿಲ್ಲ ಎಂದು ದೂರಿದ್ದಾರೆ.

ಪೀಕ್ ಅವರ್, ಮಳೆ ಅಥವಾ ಹೆಚ್ಚಿನ ಬೇಡಿಕೆಯ ಸಂದರ್ಭಗಳಲ್ಲಿ ಪ್ರಯಾಣಿಕರಿಗೆ ಎರಡು ಪಟ್ಟು ದರ ವಿಧಿಸುವ ಮೂಲಕ ಉಬರ್ ಕರ್ನಾಟಕದ ಒಂದು ನಗರ, ಒಂದು ದರ ನೀತಿಯನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದ್ದಾರೆ. ಈ ವೇಳೆ, ಗುಂಪನ್ನು ಚದುರಿಸಲು ಪೊಲೀಸರು ಲಾಠಿ ಚಾರ್ಜ್ ನಡೆಸಿದರು. ಹಲವು ಚಾಲಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

***************

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ೫ ನಗರ ಪಾಲಿಕೆಗಳಲ್ಲಿ ಹೆಚ್ಚು ಬಾಕಿ ಉಳಿಸಿಕೊಂಡಿರುವ ಸ್ವತ್ತುಗಳನ್ನು ಪಟ್ಟಿ ಮಾಡಿ ಆಸ್ತಿ ತೆರಿಗೆ ವಸೂಲಿ ಮಾಡುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಬಿಎ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಸಂಗ್ರಹ, ಇ-ಖಾತಾ, ಬಿ ಖಾತೆಯಿಂದ ಎ-ಖಾತಾಗೆ ಪರಿವರ್ತನೆ ಮಾಡುವ ಕುರಿತು ನಡೆದ ವರ್ಚ್ಯುವಲ್ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಆಸ್ತಿ ತೆರಿಗೆ ಪರಿಷ್ಕರಣೆ ಪ್ರಕರಣಗಳನ್ನು ಪತ್ತೆ ಹಚ್ಚುವಂತೆ ತಿಳಿಸಿದ್ದಾರೆ.

ಆಯಾ ನಗರ ಪಾಲಿಕೆಗಳ ಆಯುಕ್ತರುಗಳು ಆಸ್ತಿ ತೆರಿಗೆ ಸಂಗ್ರಹಿಸುವ ಸಲುವಾಗಿ ಹೆಚ್ಚು ಗಮನ ನೀಡಬೇಕು. ಈ ಸಂಬಂಧ  ಪ್ರತಿನಿತ್ಯ ಕಂದಾಯ ಅಧಿಕಾರಿಗಳ ಜೊತೆ ಪರಿಶೀಲನಾ ಸಭೆ ನಡೆಸಿ, ಹೆಚ್ಚು ಆಸ್ತಿ ತೆರಿಗೆ ಸಂಗ್ರಹಿಸಲು ಕ್ರಮವಹಿಸಲು ನಿರ್ದೇಶನ ನೀಡಿದ್ದಾರೆ.

ಕಂದಾಯ ವಿಭಾಗದ ವಿಶೇಷ ಆಯುಕ್ತ ಮೌನೀಶ್ ಮೌದ್ಗಿಲ್ ಮಾತನಾಡಿ, ನಗರದ ೫ ನಗರ ಪಾಲಿಕೆಗಳಲ್ಲಿ ೬ ಸಾವಿರದ ೭೦೦ ಕೋಟಿ ರೂಪಾಯಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಸುಪ್ರೀಂಕೋರ್ಟ್ ಆದೇಶದಂತೆ ತಾಲೂಕಿನಾದ್ಯಂತ ಸಾರ್ವಜನಿಕ ಸ್ಥಳಗಳು ಹಾಗೂ ಸರ್ಕಾರಿ ಕಚೇರಿಗಳ ಸುತ್ತಮುತ್ತ ಬೀದಿನಾಯಿಗಳ ಹಾವಳಿಗೆ ಕಡಿವಾಣ ಹಾಕುವಂತೆ ಶಾಸಕ ಸ್ವರೂಪ್ ಪ್ರಕಾಶ್ ಸೂಚನೆ ನೀಡಿದ್ದಾರೆ.

ಹಾಸನದಲ್ಲಿಂದು ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೀದಿನಾಯಿಗಳ ಹಾವಳಿಯಿಂದ ತಾಲೂಕಿನಲ್ಲಿ ಸಾಕಷ್ಟು ಸಮಸ್ಯೆಗಳು ಆಗುತ್ತಿವೆ. ಮಹಾನಗರ ಪಾಲಿಕೆ ಅಧಿಕಾರಿಗಳು ಶೀಘ್ರವೇ ಕಾರ್ಯಪ್ರವೃತ್ತರಾಗಿ ಹಿಡಿದ ನಾಯಿಗಳನ್ನು ಬಿಡಲು ಶೆಡ್ ನಿರ್ಮಾಣ ಮಾಡಿ, ಆರೈಕೆ ಮಾಡುವಂತೆ ತಿಳಿಸಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಎನ್.ಸಿ.ಸಿ- ನ್ಯಾಷನಲ್ ಕೆಡೆಟ್ ಕೋರ್ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು.

ಇದರ ಅಂಗವಾಗಿ ಎನ್.ಸಿ.ಸಿ ವಿದ್ಯಾರ್ಥಿಗಳಿಂದ ಸೈಕಲ್ ಜಾಥಾ ನಡೆಯಿತು.

ಯುವಕರಲ್ಲಿ ರಾಷ್ಟ್ರೀಯ ಏಕತೆ, ಸಮಗ್ರತೆ ಹಾಗೂ ಸಾಮಾಜಿಕ ಸಾಮರಸ್ಯ ಮೂಡಿಸಲು ಎನ್.ಸಿ.ಸಿ ಸಹಕಾರಿಯಾಗಲಿದೆ ಎಂದು ಎನ್.ಸಿ.ಸಿ ಅಧಿಕಾರಿ ಕ್ಯಾಪ್ಟನ್ ಶ್ರೀನಿವಾಸ ತಿಳಿಸಿದ್ದಾರೆ.

***************

ವಿಜಯಪುರ ಜಿಲ್ಲೆಯಲ್ಲಿ ಶಾಶ್ವತ ಕುಡಿಯುವ ನೀರಿನ ಸಮಗ್ರ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ರೂಪಿತಗೊಂಡ ಜಲಧಾರೆ ಯೋಜನೆಯಡಿಯಲ್ಲಿ ಎಲ್ಲ ಗ್ರಾಮೀಣ ಜನ ವಸತಿಗಳಿಗೆ ತಲಾ ೫೫ ಎಲ್.ಪಿ.ಸಿ.ಡಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ೧೩೫ ಎಲ್.ಪಿ.ಸಿ.ಡಿಯಂತೆ ನೀರನ್ನು ಪೂರೈಸುವ ಉದ್ದೇಶ ಹೊಂದಲಾಗಿದೆ.

***************

ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಶೇಕಡ ೫೦ರ ರಿಯಾಯಿತಿಯಡಿ ದಂಡ ಪಾವತಿಸಲು ಸರ್ಕಾರ ಮತ್ತೊಮ್ಮೆ ಅವಕಾಶ ಕಲ್ಪಿಸಿದೆ.

ಇದೇ ೨೧ ರಿಂದ ಡಿಸೆಂಬರ್ ೧೨ ರವರೆಗೆ ಈ ರಿಯಾಯಿತಿ ಬಳಸಿಕೊಂಡು ವಾಹನಗಳ ಮಾಲೀಕರು ದಂಡ ಪಾವತಿಸಬಹುದು ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನಟೇಶ ಆರ್. ತಿಳಿಸಿದ್ದಾರೆ.

***************

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ವೆಲ್ಲೆಸ್ಲಿ ಸೇತುವೆ ಬಳಿ ನಗರದ ತ್ಯಾಜ್ಯ ನೀರು ಕಾವೇರಿ ನದಿಗೆ ಸೇರುತ್ತಿದೆ. ಈ ಕುರಿತಂತೆ ಪರಿಶೀಲನೆ ನಡೆಸಿದ ಉಪ ಲೋಕಾಯುಕ್ತರು ಸ್ವಯಂ ಪ್ರೇರಿತ ದೂರು ದಾಖಲಿಸಿದ್ದು, ಕಾವೇರಿ ನದಿಗೆ ಕೊಳಚೆ ನೀರು ಸೇರಿಸದಂತೆ ಸೂಕ್ತ ಕ್ರಮವಹಿಸಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

*******ಮುಕ್ತಾಯ*******